



ಅರುಣ ಪಿ. ಭಟ್ಟ

## ವಾರಭವಿಷ್ಯ: 22.02.2024ರಿಂದ 28.02.2024ರವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಸಹೋದರರ ವಿಶ್ವಾಸವನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ನಿಮ್ಮ ಬಹುಕಾಲದ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿವೆ. ಆದಾಯ ಹೆಚ್ಚುವ ಅವಕಾಶ ವಿಪುಲವಾಗಿದೆ. ಪ್ರಗತಿಗೆ ಅತ್ಯುತ್ತಮ ಅವಕಾಶಗಳಿವೆ. ಶುಭದಿನ 27. ವಿಷ್ಣು ಸಹಸ್ರನಾಮ ಪಠಿಸಿರಿ.




ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶ. ಬ್ಯಾಂಕಿಂಗ್ ವ್ಯವಹಾರಗಳು ಯೋಜಿತವಾಗಿ ನಡೆಯಲಿವೆ. ಕಷ್ಟದ ಕಾರ್ಯಗಳನ್ನು ಸುಲಭವಾಗಿ ಮಾಡಿ ಮುಗಿಸಲಿದ್ದೀರಿ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ. ಅವಿವಾಹಿತರಿಗೆ ವಿವಾಹದ ಯೋಗ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ 25. ಹನುಮಾನ್ ಚಾಲಿಸ್ ಪಠಿಸಿರಿ.




ಆತ್ಮೀಯರೊಡನೆ ವಿವಾದಗಳು ಹೆಚ್ಚಾಗಬಹುದು. ಭೂ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಅನಗತ್ಯವಾಗಿ ಮಾತಿನಲ್ಲಿ ಏನಾದರೂ ಹೇಳಿ ಸಿಲುಕಬೇಡಿ. ಕೆಲಸದ ವಿಷಯದಲ್ಲಿ ಸಮಸ್ಯೆಗಳು ಉದ್ಭವವಾಗಲಿವೆ. ಒತ್ತಡಭರಿತ ವಿಚಾರಗಳಿಂದ ಖಿನ್ನತೆ ಆವರಿಸಲಿದೆ. ಬೇರೆ ಸ್ಥಳದಲ್ಲಿ ನಡೆಯುತ್ತಿರುವ ಕೆಲಸಕ್ಕೆ ನಿಯೋಜನೆ ಆಗಬಹುದು. ಶುಭದಿನ 28. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಪ್ರೇಕ್ಷಣೀಯ ಸ್ಥಳಗಳಿಗೆ ಭೇಟಿ ಮಾಡುವ ಸಾಧ್ಯತೆ ಇದೆ. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಪ್ರೀತಿ ಪ್ರೇಮ ಸಂಬಂಧದಲ್ಲಿ ಇರುವವರು ಹಿತಾನುಭವವನ್ನು ಪಡೆಯಲಿದ್ದೀರಿ. ಶುಭದಿನ 26. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ನಿಮ್ಮ ಕಾರ್ಯಗಳಿಗೆ ತೊಂದರೆ ನೀಡುವ ವ್ಯಕ್ತಿಗಳನ್ನು ಗುರುತಿಸಿ ದೂರವಿಡುವುದು ಒಳ್ಳೆಯದು. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ಪತ್ನಿಯ ವಿಚಾರಗಳಿಗೆ ಸಹಮತ ನೀಡಿ. ಆರ್ಥಿಕ ವಿಷಯದಲ್ಲಿ ಸಂತೃಪ್ತಿ ಮೂಡಲಿದೆ. ಅಗತ್ಯ ಇರುವ ಸಲಕರಣೆಗಳನ್ನು ಖರೀದಿಸುತ್ತೀರಿ. ಶುಭದಿನ 24. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು. ಹೆಚ್ಚಿನ ಕೆಲಸ ಹಾಗೂ ಹೊಸ ಆದಾಯ ಮಾರ್ಗ ಕಂಡುಬರಲಿದೆ. ನವೀನವಾಗಿ ಪ್ರಾರಂಭ ಮಾಡಿರುವ ಉದ್ಯೋಗ ಭರವಸೆಯ ಮಹಾಪೂರವನ್ನೇ ತರಲಿದೆ. ಆದಾಯ ಹೆಚ್ಚಳವಾಗಿದ್ದರೂ ಖರ್ಚು ವಿಪರೀತ ಹೆಚ್ಚಾಗಲಿದೆ. ಅನಪೇಕ್ಷಿತ ಖರ್ಚುಗಳಿಗೆ ಕಡಿವಾಣ ಹಾಕುವುದು ಒಳ್ಳೆಯದು. ಶುಭದಿನ 24. ಆದಿತ್ಯ ಹೃದಯ ಪಠಿಸಿರಿ.




ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ವ್ಯವಹಾರದಲ್ಲಿ ಅಲಕ್ಷ್ಯ ಹೆಚ್ಚಾಗಬಹುದು. ಕಟ್ಟಡ ನಿರ್ಮಾಣದಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ. ದೈವ ಸಂಕಲ್ಪದ ಮೊರೆಹೋಗುವ ಸಾಧ್ಯತೆ ಕಂಡುಬರಲಿದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ 26. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಪರಿಣಾಮಕಾರಿಯಾದ ಕಾರ್ಯ ಅನುಷ್ಠಾನಕ್ಕೆ ಹೆಚ್ಚು ಸಿಬ್ಬಂದಿಯ ಅಗತ್ಯ ಬರುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಚರ್ಚಾಕೂಟಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಶುಭದಿನ 27. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ವ್ಯಾವಹಾರಿಕ ಕ್ಷೇತ್ರದಲ್ಲಿ ಹಿನ್ನಡೆ ಆಗಬಹುದು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಶುಭದಿನ 28. ಕಾಲಭೈರವನ ಸೇವೆ ಮಾಡಿರಿ.




ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಅದೃಷ್ಟದ ಭಾಗ್ಯ ಬರಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗುವ ಸಾಧ್ಯತೆ. ಸಹೋದ್ಯೋಗಿಗಳ ಜೊತೆ ಮುಖ್ಯವಾದ ಚರ್ಚೆ ನಡೆಸಲಿದ್ದೀರಿ. ಅಲರ್ಜಿ–ಸೋಂಕು ಕಾಡುವ ಸಾಧ್ಯತೆ ಇದೆ. ಶುಭದಿನ 26. ಸೌಂದರ್ಯ ಲಹರಿ ಪಠಿಸಿರಿ.




ಅಪರಿಚಿತ ವ್ಯಕ್ತಿಗಳಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ನಂಬಿಕೆದ್ರೋಹದಂತಹ ಚಟುವಟಿಕೆಗಳು ನಡೆಯಲಿದ್ದು ಎಚ್ಚರದಿಂದಿರಿ. ನಿಮ್ಮೆಲ್ಲಾ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯಕವಾಗಿ ಬೇಕಾಗಿದೆ. ಹಣಕಾಸಿನ ವಿಷಯದಲ್ಲಿ ಉತ್ತಮ ರೀತಿಯ ವ್ಯವಹಾರ ಕಾಣಬಹುದು. ಆರೋಗ್ಯ ಸಾಧಾರಣವಾಗಿ ಇರುತ್ತದೆ. ಶುಭದಿನ 25. ಕನಕಧಾರಾ ಸ್ತೋತ್ರ ಪಠಿಸಿರಿ.




ಯೋಜನೆಗಳ ಫಲಿತಾಂಶ ವಿಳಂಬವಾಗುವ ಸಾಧ್ಯತೆ ಇದೆ. ಕೆಲಸಗಳಲ್ಲಿ ನಿಮ್ಮ ಪಾಲ್ಗೊಳ್ಳುವಿಕೆ ಉತ್ತಮವಾಗಲಿದೆ. ಕಲಿಕೆಯ ವಿಷಯಾಸಕ್ತಿ ತುಂಬಾ ಉತ್ತಮ ಮಟ್ಟದಲ್ಲಿ ಇರಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ಆರ್ಥಿಕ ಸ್ಥಿತಿ ಮಧ್ಯಮ ಗತಿಯಲ್ಲಿ ನಡೆಯಲಿದೆ. ವ್ಯವಹಾರಗಳಲ್ಲಿ ಸಂತೃಪ್ತಿಯನ್ನು ಅನುಭವಿಸಲಿದ್ದೀರಿ. ಶುಭದಿನ 27. ಚಂಡಿ ಪಾರಾಯಣ ಮಾಡಿರಿ.